ಆ) ಹಾಗಿದ್ದಲ್ಲಿ ಕಾಮಗಾರಿಯ ಅಂದಾಜು ಮತ್ತು ನಕ್ಷೆಯನ್ನು ಸಿದ್ಧಪಡಿಸಲಾಗಿದೆಯೇ?

ಇ) ಇಲ್ಲದಿದ್ದಲ್ಲಿ ತ್ವರಿತವಾಗಿ ಸಿದ್ಧಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಎಂ.ವೈ.ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ) ತರೀಕೆರೆ ತಾಲ್ಲೂಕಿನ ಕೆಲವು ಗ್ರಾಮಗಳ ಕುಡಿಯುವ ನೀರಿನಲ್ಲಿ ಗುಣಮಟ್ಟ ಸಮಸ್ಯೆ ಕಂಡು ಬಂದಿದ್ದು, ಸದರಿ ಗ್ರಾಮಗಳಿಗೆ ಸುರಕ್ಷಿತ ಕುಡಿಯುವ ನೀರಿನ ಪೂರೈಕೆಗಾಗಿ ಅಂದಾಜು ಪಟ್ಟಿಯನ್ನು ತಯಾರಿಸಲಾಗುತ್ತಿದೆ.

ಆ) ಅಂದಾಜು ಮತ್ತು ನಕ್ಷೆ ತಯಾರಿಸುವ ಕೆಲಸಗಳು ಪ್ರಗತಿಯಲ್ಲಿದೆ.

ಇ) ಅಂದಾಜು ಮತ್ತು ನಕ್ಷೆಯನ್ನು ತ್ವರಿತವಾಗಿ ಸಿದ್ಧಪಡಿಸಲು ಚಿಕ್ಕಮಗಳೂರು ಜಿಲ್ಲಾ ಪಂಚಾಯತಿಗೆ ನಿರ್ದೇಶಿಸಲಾಗಿದೆ.

ಬೆಳ್ತಂಗಡಿ ತಾಲ್ಲೂಕಿನಲ್ಲಿರುವ ಸಮುದಾಯ ಆರೋಗ್ಯ ಕೇಂದ್ರಗಳು.

1848(1856)

ಶ್ರೀ ಪ್ರಭಾಕರ ಬಂಗೇರ ಕೆ.(ಬೆಳ್ತಂಗಡಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಮಾಡಿ ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕಿನಲ್ಲಿರುವ ಸಮುದಾಯ ಆರೋಗ್ಯ ಕೇಂದ್ರ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸಿಬ್ಬಂದಿ ಕೊರತೆ ಇರುವುದು ಸರಕಾರದ ಗಮನಕ್ಕೆ ಬಂದಿದೆಯೆ? ಹಾಗಿದ್ದಲ್ಲಿ ಈ ಕುರಿತು ಸರಕಾರ ಕೈಗೊಂಡ ಕ್ರಮಗಳೇನು?

ಆ) ಸದರಿ ಕೇಂದ್ರಗಳಿಗೆ ಅವಶ್ಯಕತೆಗನುಗುಣವಾಗಿ ಔಷಧಿಗಳು ಸರಬರಾಜು ಮಾಡಲಾಗುತ್ತಿದೆಯೆ? ಔಷಧಿಗಳ ಕೊರತೆಯಿಂದ ಉಂಟಾಗುತ್ತಿರುವ ಅನಾನುಕೂಲತೆಗಳನ್ನು ಪರಿಹರಿಸಲು ಸರಕಾರ ಸಕಾಲಿಕ ಕ್ರಮಗಳನ್ನು ಕೈಗೊಂಡಿದೆಯೆ?

ಇ) ಬೆಳ್ತಂಗಡಿ ತಾಲ್ಲೂಕು ಕೇಂದ್ರ ಸ್ಥಾನದಲ್ಲಿರುವ ಬೆಳ್ತಂಗಡಿ ಸಮುದಾಯ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೆ ಏರಿಸುವ ಪ್ರಸ್ತಾವನೆಯು ಸರಕಾರದ ಪರಿತೀಲನೆಯಲ್ಲಿದೆಯೆ? ಹಾಗಿದ್ದಲ್ಲಿ ಯಾವಾಗ ಮೇಲ್ದರ್ಜೆಗೆ ಏರಿಸಲಾಗುವುದು?

ಈ) ಉಪ ಆರೋಗ್ಯ ಕೇಂದ್ರಗಳಲ್ಲಿರುವ ಎ.ಎನ್.ಎಂ.ಗಳ ಕೊರತೆಯನ್ನು ಕೂಡಲೇ ನಿವಾರಿಸಲು ಸರ್ಕಾರವು ಶೀಘ್ರ ಕ್ರಮಕೈಗೊಳ್ಳುವುದೆ?

ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ):

ಅ) ಬಂದಿದೆ.

ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಮತ್ತು ವೈದ್ಯೇತರ ಕೆಲವು ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ. ವಿಶೇಷ ನೇಮಕಾತಿ ಮೂಲಕ 550 ವೈದ್ಯರ ಹುದ್ದೆಗಳನ್ನು ತುಂಬಲು ಪ್ರಕ್ರಿಯೆ ನಡೆಯುತ್ತಿದೆ.

ಆ) ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ, ರೂ.75,000 30 ಹಾಸಿಗೆಗಳ ಸಮುದಾಯ ಆರೋಗ್ಯ ಕೇಂದ್ರಗಳಿಗೆ ರೂ.2 ಲಕ್ಷ ಹಾಗೂ 50 ಹಾಸಿಗೆಗಳ ಸಮುದಾಯ ಆರೋಗ್ಯ ಕೇಂದ್ರಗಳಿಗೆ 3 ಲಕ್ಷ ರೂ.ಗಳ ಔಷಧಿಗಳನ್ನು ಸರಬರಾಜು ಮಾಡಲಾಗುತ್ತಿದೆ. ಅದಲ್ಲದೆ, ಪ್ರಧಾನ ಮಂತ್ರಿಯವರ ಗ್ರಾಮೋದಯ ಯೋಜನೆಯಡಿಯಲ್ಲಿ ಪ್ರತಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ 10,000 ರೂ.ಗಳನ್ನು ಒದಗಿಸಲಾಗಿದೆ.

ಇ) ಉದ್ಭವಿಸುವುದಿಲ್ಲ.

ಈ) ಉಪ ಆರೋಗ್ಯ ಕೇಂದ್ರಗಳಲ್ಲಿ 19 ಕೆ.ಮ.ಆ.ಸ. ಹುದ್ದೆ ಖಾಲಿ ಇದ್ದು ಅವುಗಳಲ್ಲಿ 2 ಹುದ್ದೆಗಳನ್ನು ಜಿಲ್ಲಾಧಿಕಾರಿಗಳು ಮಂಗಳೂರು ಇವರು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿರುತ್ತಾರೆ. ಉಳಿದ ಹುದ್ದೆಗಳನ್ನು ಇಲಾಖೆಯಲ್ಲಿ ತರಬೇತಿ ಹೊಂದಿದ ಅಭ್ಯರ್ಥಿಗಳಿಂದ ನೇಮಕಾತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಬೆಳ್ತಂಗಡಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಉಪನ್ಯಾಸಕರ ಕೊರತೆ.

1849(1858)

ಶ್ರೀ ಪ್ರಭಾಕರ ಬಂಗೇರ ಕೆ.(ಬೆಳ್ತಂಗಡಿ): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?